ಕರ್ನಾಟಕ ಸರ್ಕಾರ

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03**

E-Mail Id: adpigsection@gmail.com Phone No: 080-23460525

ಸಂಖ್ಯೆ: **ಕ್ಯೂ3/ಡಿ.ಪಿ.ಎಸ್.ಇ/ಮು.ಪ/ಜೂನ್-23/01/2023-24** ದಿನಾಂಕ:07/07/2023

**ಸುತ್ತೋಲೆ**

**ವಿಷಯ:**-ಜೂನ್-2023 ರ ಮಾಹೆಯಲ್ಲಿ ನಡೆದ ಡಿ.ಪಿ.ಎಸ್.ಇ ಮುಖ್ಯ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಕುರಿತು.

*******

ಜೂನ್-2023ರ ಮಾಹೆಯಲ್ಲಿ ನಡೆದ ಡಿ.ಪಿ.ಎಸ್.ಇ ಮುಖ್ಯ ಪರೀಕ್ಷೆಯ ಫಲಿತಾಂಶವನ್ನು **ದಿನಾಂಕ:11-07-2023ರ ಅಪರಾಹ್ನ 3.00 ಗಂಟೆಯ ನಂತರ** ಮಂಡಲಿಯ ಅಂತರ್ಜಾಲ **https://kseab.karnataka.gov.in** ದಲ್ಲಿ ಪ್ರಕಟಿಸಲಾಗುವುದು ಹಾಗೂ ಸಂಸ್ಥೆಗಳ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಸಂಸ್ಥೆಯ ಲಾಗಿನ್‌ನಲ್ಲಿ ಲಭ್ಯ ಮಾಡಲಾಗುವುದು. ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗೆ ಫಲಿತಾಂಶದಲ್ಲಿ ತಿದ್ದುಪಡಿ ಇದ್ದಲ್ಲಿ ನಿಯಮಾನುಸಾರ ತಿದ್ದುಪಡಿ ಮಾಡಲಾಗುವುದು. ವಿಶೇಷ ಪರಿಸ್ಥಿತಿಯಲ್ಲಿ ಅಂದರೆ **ಪರೀಕ್ಷೆಯ ದುರಾಚರಣೆ, ವಂಚನೆ, ಅನುಚಿತ ವರ್ತನೆ ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ಪರೀಕ್ಷಾ ಫಲಿತಾಂಶವನ್ನು ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.**

ಜೂನ್-2023ರ ಡಿ.ಪಿ.ಎಸ್.ಇ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಾಗಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ನಿಗದಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.

**ಉತ್ತರಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಈ ಕೆಳಗಿನಂತೆ ದಿನಾಂಕ ನಿಗದಿಪಡಿಸಿದೆ.**

| ಕ್ರ.ಸಂ | ವಿವರ | ದಿನಾಂಕ |
|---|---|---|
| 01 | ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಾಗಿ ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಲು ಪ್ರಾರಂಭಿಕ ದಿನಾಂಕ | 12.07.2023 |
| 02 | ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 19.07.2023 |
| 03 | ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಪ್ರಾರಂಭಿಕ ದಿನಾಂಕ | 20.07.2023 |
| 04 | ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ ಅಂಕಗಳ ಮರುಎಣಿಕೆಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 20.07.2023 |
| 05 | ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ ಅಂಕಗಳ ಮರುಎಣಿಕೆಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲುಕೊನೆಯ ದಿನಾಂಕ | 24.07.2023 |

**ಉತ್ತರಪತ್ರಿಕೆಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಸ್ಕ್ಯಾನ್‌ಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರು ಎಣಿಕೆಗೆ ಅರ್ಜಿ ಸಲ್ಲಿಸುವಂತಿಲ್ಲ. ಸ್ಕ್ಯಾನ್ ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿ ಸರಿಪಡಿಸಿಕೊಳ್ಳಬಹುದಾಗಿರುತ್ತದೆ. ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಮಂಡಲಿಯ ವೆಚ್ಚದಲ್ಲಿ ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಸಂಸ್ಥೆಗೆ ಹಾಗೂ ಈ ಬಗ್ಗೆ ಮಾಹಿತಿಯನ್ನು ಅಭ್ಯರ್ಥಿಗಳಿಗೆ ರವಾನಿಸಲಾಗುವುದು ಹಾಗೂ ಅಂಕಗಳಲ್ಲಿ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಅಭ್ಯರ್ಥಿಗೆ ಹಿಂದಿರುಗಿಸಲಾಗುವುದು**

**ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿರುವುದರಿಂದ ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ರದ್ದುಪಡಿಸಲಾಗಿದೆ. ಇದಕ್ಕಾಗಿ ಅರ್ಜಿ ಸಲ್ಲಿಸಲು ಮಂಡಲಿಯ ಜಾಲತಾಣ ವಿಳಾಸ https://kseab.karnataka.gov.in ಇಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಅಭ್ಯರ್ಥಿಗಳು ತಮ್ಮ ನೋಂದಣಿ ಸಂಖ್ಯೆ ಹಾಗೂ ಸ್ಕ್ಯಾನ್ ಪ್ರತಿ ಪಡೆಯುವ ವಿಷಯಗಳ ಮಾಹಿತಿಯನ್ನು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕಾಗಿರುತ್ತದೆ. ಸ್ಕ್ಯಾನ್ ಪ್ರತಿ ಪಡೆಯಲು ಬಯಸುವ ಅಭ್ಯರ್ಥಿಗಳು ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ. 500/-ಗಳನ್ನು ಆನ್‌ಲೈನ್‌ನಲ್ಲಿಯೇ ಪಾವತಿಸಬೇಕಾಗಿರುತ್ತದೆ. ಸ್ಕ್ಯಾನ್ ಪ್ರತಿಗಾಗಿ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಸ್ವೀಕಾರವಾದ ಬಗ್ಗೆ ಹಾಗೂ ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿ ಅಪ್‌ಲೋಡ್ ಮಾಡಿರುವ ಬಗ್ಗೆ ಮಂಡಳಿ ಜಾಲತಾಣದಲ್ಲಿ **'click here to know status for scanned copy'** ಆಯ್ಕೆ ಮಾಡಿ ಪರಿಶೀಲಿಸಿಕೊಳ್ಳಬಹುದಾಗಿದೆ. ಹೀಗೆ ಅಪ್‌ಲೋಡ್ ಆದ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಆನ್‌ಲೈನ್‌ನಲ್ಲಿ ಅಭ್ಯರ್ಥಿಗಳು ಮೇಲ್ಕಾಣಿಸಿದ ಜಾಲತಾಣದಿಂದ ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ, ಅಪೇಕ್ಷಿಸಿದಲ್ಲಿ ಅಂಕಗಳ ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

**ಉತ್ತರ ಪತ್ರಿಕೆಗಳ ಮರುಎಣಿಕೆಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಮರುಎಣಿಕೆಗಾಗಿ ಅರ್ಜಿಸಲ್ಲಿಸಬಹುದಾಗಿದೆ. ಅಂಕಗಳ ಮರುಎಣಿಕೆಗಾಗಿ ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ. 150/- ಅನ್ನು ಆನ್‌ಲೈನ್ ಮೂಲಕ ಪಾವತಿಸಬೇಕಾಗುತ್ತದೆ.

**ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಛಾಯಾಪ್ರತಿಯನ್ನು ಪಡೆದ ನಂತರ ಅಭ್ಯರ್ಥಿಗಳು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅಪೇಕ್ಷಿಸಿದಲ್ಲಿ, ಆನ್‌ಲೈನ್ ಮೂಲಕ ಒಂದು ವಿಷಯಕ್ಕೆ ಶುಲ್ಕ ರೂ.800/-ಅನ್ನು ಪಾವತಿಸಬೇಕಿರುತ್ತದೆ. ಮರುಮೌಲ್ಯಮಾಪನದ ನಂತರ 10 ಅಥವಾ 10ಕ್ಕಿಂತ ಹೆಚ್ಚು ಅಂಕಗಳ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಹಿಂದಿರುಗಿಸಲಾಗುವುದು.

ಮರುಎಣಿಕೆ ಅಥವಾ ಮರುಮೌಲ್ಯಮಾಪನದ ಫಲಿತಾಂಶವನ್ನು ಪ್ರಕಟಿಸಿದ ನಂತರ ಮಂಡಳಿಯ ಜಾಲತಾಣದಲ್ಲಿ ಪರಿಷ್ಕೃತ ಫಲಿತಾಂಶವನ್ನು ಪರಿಶೀಲಿಸಿಕೊಳ್ಳಬಹುದಾಗಿದೆ.

**ಆನ್‌ಲೈನ್ ಮೂಲಕ ಶುಲ್ಕ ಪಾವತಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಛಾಯಾಪ್ರತಿ/ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ನಿಗಧಿತ ಶುಲ್ಕವನ್ನು ಅನ್‌ಲೈನ್ ಮೂಲಕ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗದಿತ ಶುಲ್ಕವನ್ನು ಆನ್‌ಲೈನ್‌ನಲ್ಲಿ DEBIT CARD/CREDIT CARD/NET BANKING ಮೂಲಕ ಶುಲ್ಕ ಪಾವತಿಸಬಹುದಾಗಿದೆ.

ಸ್ಕ್ಯಾನ್‌ಪ್ರತಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಸಂಬಂಧ ಫ್ಲೋಚಾರ್ಟ್ ಅನ್ನು ಮಂಡಳಿಯ ಜಾಲತಾಣದಲ್ಲಿ ಲಭ್ಯಮಾಡಲಾಗಿದೆ.

| ಶುಲ್ಕದ ವಿವರ | |
|---|---|
| ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಶುಲ್ಕ ಒಂದು ವಿಷಯಕ್ಕೆ | ರೂ. 500/- (ಐದು ನೂರು ರೂಪಾಯಿಗಳು) |
| ಮರುಮೌಲ್ಯಮಾಪನ ಶುಲ್ಕ ಒಂದು ವಿಷಯಕ್ಕೆ | ರೂ. 800/- (ಎಂಟು ನೂರು ರೂಪಾಯಿಗಳು) |
| ಉತ್ತರ ಪತ್ರಿಕೆಗಳ ಮರುಎಣಿಕೆ ಶುಲ್ಕ (ಒಂದು ವಿಷಯಕ್ಕೆ) | ರೂ.150/-(ನೂರ ಐವತ್ತು ರೂಪಾಯಿಗಳು) |

ಫಲಿತಾಂಶಕ್ಕೆ ಸಂಬಂಧಿಸಿದಂತೆ ಸಂಸ್ಥೆಯ ಮುಖ್ಯಸ್ಥರಿಗೆ ಸೂಚನೆಗಳು:

- **ಒಂದುವೇಳೆ ಯಾವುದಾದರೂ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.**
- ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದೃಢೀಕೃತ ದಾಖಲೆಗಳೊಂದಿಗೆ (ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ ದೃಢೀಕೃತ ಅಂಕಪಟ್ಟಿ) ಸಂಬಂಧಿಸಿದ ಸಂಸ್ಥೆಯ ಮುಖ್ಯಸ್ಥರು **ರೂ.200/- ದಂಡಶುಲ್ಕವನ್ನು** ಮಂಡಳಿಗೆ ಪಾವತಿಸಲಾಗಿರುವ Neft Challan ಮೂಲ ಪ್ರತಿಯೊಂದಿಗೆ ಡಯಟ್ ಪ್ರಾಂಶುಪಾಲರ ಮುಖಾಂತರ ಪ್ರಸ್ತಾವನೆ ಸಲ್ಲಿಸಿದಲ್ಲಿ ನಿಯಮಾನುಸಾರ ಕ್ರಮ ವಹಿಸಲಾಗುವುದು.
- ಅಭ್ಯರ್ಥಿಯು ದ್ವಿತೀಯ ಡಿ.ಪಿ.ಎಸ್.ಇ ಯಲ್ಲಿ ಉತ್ತೀರ್ಣರಾಗಿದ್ದು, ಪ್ರಥಮ ಡಿ.ಪಿ.ಎಸ್.ಇ ಯಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಅಂತಹ ಫಲಿತಾಂಶವನ್ನು FNC (First Year Not Cleared) ಎಂದು ಪ್ರಕಟಿಸಲಾಗಿದೆ. ಪ್ರಥಮ ಡಿ.ಪಿ.ಎಸ್.ಇ ಯಲ್ಲಿ ಉತ್ತೀರ್ಣರಾದ ನಂತರ ಸದರಿ ಫಲಿತಾಂಶಪಟ್ಟಿ ಅಥವಾ ಅಂಕಪಟ್ಟಿಯ ಜೆರಾಕ್ಸ್ ಪ್ರತಿಯನ್ನು ಧೃಢೀಕರಿಸಿ ಫಲಿತಾಂಶ ಪ್ರಕಟವಾದ 30 ದಿನಗಳೊಳಗೆ ಪ್ರಸ್ತಾವನೆಯನ್ನು ಮಂಡಳಿಗೆ ಸಲ್ಲಿಸಿದಲ್ಲಿ ದ್ವಿತೀಯ ಡಿ.ಪಿ.ಎಸ್.ಇ ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಸ್ಥೆಯ ಲಾಗಿನ್‌ಗೆ ಹಾಗೂ ಅಂಕಪಟ್ಟಿಯನ್ನು ಅಭ್ಯರ್ಥಿಯ ನೋಂದಾಯಿಸಿದ ಮೊಬೈಲ್ ಸಂಖ್ಯೆಗೆ ಲಿಂಕ್‌ಅನ್ನು ಎಸ್.ಎಂ.ಎಸ್ ಮೂಲಕ ನೀಡಿ ಡೌನ್‌ಲೋಡ್ ಮಾಡಿಕೊಳ್ಳಲು ಅನುವು ಮಾಡಿಕೊಡಲಾಗುವುದು. 30 ದಿನಗಳ ನಂತರ ಸಲ್ಲಿಸುವ ಪ್ರತಿಯೊಂದು ಪ್ರಕರಣಕ್ಕೆ ರೂ. 1000/- ದಂಡ ಶುಲ್ಕವನ್ನು ಸಂಸ್ಥೆಯ ಪ್ರಾಂಶುಪಾಲರು ಮಂಡಳಿಗೆ ಪಾವತಿಸಬೇಕಾಗಿರುತ್ತದೆ. ಈ ಮೊತ್ತವನ್ನು ಯಾವುದೇ ಕಾರಣಕ್ಕೂ ಅಭ್ಯರ್ಥಿಗಳಿಂದ ವಸೂಲಿ ಮಾಡಬಾರದು.
- ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ಅಭ್ಯರ್ಥಿಗೆ ಮಂಡಲಿಯಿಂದ Online ಮೂಲಕ ನೀಡಿದ Digital ಅಂಕಪಟ್ಟಿಯು ಆಯಾ ಅಭ್ಯರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.
- ತಮ್ಮ ಸಂಸ್ಥೆಗೆ ಸಂಬಂಧಿಸದೇ ಇರುವ ಅಭ್ಯರ್ಥಿಗಳ ಫಲಿತಾಂಶ ಪಟ್ಟಿ ತಮ್ಮ ಸಂಸ್ಥೆಯ ಲಾಗಿನ್‌ನಲ್ಲಿ ಪ್ರಕಟವಾಗಿದ್ದು ಕಂಡು ಬಂದಲ್ಲಿ, **080-23460525** ದೂರವಾಣಿ ಮೂಲಕ ಮಂಡಳಿಗೆ ತಿಳಿಸುವುದು.

**ಡಿ.ಪಿ.ಎಸ್.ಇ ಮುಖ್ಯ ಪರೀಕ್ಷೆಯ ಫಲಿತಾಂಶವನ್ನು** https://kseab.karnataka.gov.in **ಅಂತರ್ಜಾಲದಲ್ಲಿ ದಿನಾಂಕ:11-07-2023ರ ಅಪರಾಹ್ನ 3.00 ಗಂಟೆಯ ನಂತರ ಪ್ರಕಟಿಸಲಾಗುವುದು.**

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಜೆರಾಕ್ಸ್ ಪ್ರತಿಯನ್ನು ಮತ್ತು ಸಂಸ್ಥೆಯ ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ದಿನಾಂಕ:12-07-2023 ರಂದು ಸಂಬಂಧಿಸಿದ ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

7/7/2023

(ಹೆಚ್.ಎನ್. ಗೋಪಾಲಕೃಷ್ಣ)
ನಿರ್ದೇಶಕರು(ಪರೀಕ್ಷೆಗಳು)

ಪ್ರತಿಯನ್ನು:

1. ಸಂಬಂಧಿಸಿದ ಡಯಟ್ ಪ್ರಾಂಶುಪಾಲರಿಗೆ ಕಳುಹಿಸುತ್ತಾ, ಆಯಾ ಜಿಲ್ಲಾ ವ್ಯಾಪ್ತಿಗೆ ಸಂಬಂಧಿಸಿದ ಶಿಕ್ಷಕರ ತರಬೇತಿ ಕೇಂದ್ರಗಳ ಮುಖ್ಯಸ್ಥರು ಸಂಸ್ಥೆಯ ಲಾಗಿನ್‌ನಲ್ಲಿ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಪಡೆದು ಪ್ರಕಟಿಸುವಂತೆ
ಕ್ರಮವಹಿಸುವುದು.
2. ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ ಕಲಬುರ್ಗಿ, ಪ್ರಾಂಶುಪಾಲರುಗಳಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಿದೆ.
3. ಕಛೇರಿ ಪ್ರತಿ.